# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/335/2019–10

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 3/5/2020

## ಕಛೇರಿ ಆದೇಶ

ವಿಷಯ: ಕೋವಿಡ್–19 ಕೊರೋನಾ ವೈರಸ್‌ದಿಂದ ಲಾಕ್‌ಟೌನ್ ಮಾಡಿರುವ ಹಿನ್ನೆಲೆಯಲ್ಲಿ ಅಧಿಕಾರಿ / ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗುವ ಕುರಿತು.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 123 ಡಿಬಿಎಂ 2020 (ಭಾಗ), ದಿನಾಂಕ: 02–05–2020.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರವು ಉಲ್ಲೇಖಿತದ ಸುತ್ತೋಲೆಯಲ್ಲಿ ದಿ: 04–05–2020 ರಿಂದ ದಿನಾಂಕ: 17–05–2020ರ ವರೆಗಿನ ಅವಧಿಯಲ್ಲಿ ಕೆಂಪು ವಲಯದಲ್ಲಿ ಬರುವ ಬೆಂಗಳೂರು ನಗರದಲ್ಲಿ ಸರ್ಕಾರದ ಸಮಸಂಖ್ಯೆಯ ಸುತ್ತೋಲೆ ದಿನಾಂಕ: 18–04–2020 ಹಾಗೂ ತಿದ್ದುಪಡಿ ಸುತ್ತೋಲೆ ದಿನಾಂಕ: 20–04–2020 ಗಳಲ್ಲಿ ಪ್ರಸ್ತಾಪಿಸಿರುವ ಅಗತ್ಯ ಸೇವೆಗಳನ್ನು ಒದಗಿಸುತ್ತಿರುವ ಇಲಾಖೆಗಳಲ್ಲಿನ ಸರ್ಕಾರಿ ಕಛೇರಿಗಳಲ್ಲಿ ಶೇ. 100 ರಷ್ಟು ಗ್ರೂಪ್ ಎ, ಬಿ, ಸಿ ಮತ್ತು ಡಿ ವೃಂದದ ಅಧಿಕಾರಿ / ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗಲು ಹಾಗೂ ಉಳಿದ ಇಲಾಖೆಗಳಲ್ಲಿನ ಗ್ರೂಪ್ ಎ ಮತ್ತು ಬಿ ವೃಂದದ ಎಲ್ಲಾ ಅಧಿಕಾರಿಗಳು ಮತ್ತು ಗ್ರೂಪ್ ಸಿ ಮತ್ತು ಡಿ ವೃಂದದ ಶೇ. 33 ರಷ್ಟು ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗತಕ್ಕದೆಂದು ಆದೇಶ ಹೊರಡಿಸಿದೆ.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯು ಕೆಂಪು ವಲಯದಲ್ಲಿ ಬರುವುದರಿಂದ ಮತ್ತು ಪಾಲಿಕೆಯ ಎಲ್ಲಾ ಸಿಬ್ಬಂದಿಗಳು ಅತ್ಯಗತ್ಯ ಸೇವೆಯಲ್ಲಿ ಬರುತ್ತಿರುವುದರಿಂದ ಪಾಲಿಕೆಯ ಗ್ರೂಪ್ ಎ, ಬಿ, ಸಿ ಮತ್ತು ಡಿ ವೃಂದದ ಎಲ್ಲಾ ಅಧಿಕಾರಿಗಳು / ಸಿಬ್ಬಂದಿಗಳು ಶೇ. 100 ರಷ್ಟು ಕರ್ತವ್ಯಕ್ಕೆ ಹಾಜರಾಗಲು ಆದೇಶಿಸಿದೆ.

ಬಿ.ಹೆಚ್. ಅನಿಲ್ ಕುಮಾರ್
ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಮಾನ್ಯ ಆಯುಕ್ತರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಎಲ್ಲಾ ವಿಶೇಷ ಆಯುಕ್ತರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಕೌನ್ಸಿಲ್ ಕಾರ್ಯದರ್ಶಿರವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಯ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.
: ಎಲ್ಲಾ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರು / ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.
: ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಕಛೇರಿ ಪ್ರತಿ.